ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗುತ್ತಿಗೆ ನೌಕರರಿಗೆ ವೇತನ ನೀಡದೇ ತೊಂದರೆ ಮಾಡುತ್ತಿರುವ ಬಗ್ಗೆ.

ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

194 (19) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದ ಆಟೋ ಟಿಪ್ಪರ್ ಚಾಲಕರಿಗೆ ಗುತ್ತಿಗೆದಾರರಾದ ಶ್ರೀ ಆದರ್ಶ ಎಂಟರ್‌ಪ್ರೈಸಸ್ ಇವರು ಕಳೆದ 03 ತಿಂಗಳುಗಳಿಂದ ವೇತನ ನೀಡದೆ, ಗುತ್ತಿಗೆ ನೌಕರರಿಗೆ ತೊಂದರೆಯನ್ನುಂಟು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದ ಆಟೋ ಟಿಪ್ಪರ್ ಚಾಲಕರು, ಗುತ್ತಿಗೆದಾರರಿಗೆ ವೇತನವನ್ನು ಕೇಳಿದ್ದಕ್ಕೆ ಕಾನೂನುಬಾಹಿರವಾಗಿ 52 ವಾಹನ ಚಾಲಕರನ್ನು ಕೆಲಸದಿಂದ ತೆಗೆದುಹಾಕಲಾಗಿರುವುದು ನಿಜವೇ ; (ವಿವರ ನೀಡುವುದು)

(ಇ) ಆಟೋ ಟಿಪ್ಪರ್ ಚಾಲಕರಿಗೆ ವೇತನವನ್ನು ನೀಡದೇ ದೌರ್ಜನ್ಯವೆಸಗುತ್ತಿರುವ ಗುತ್ತಿಗೆದಾರರ ಮೇಲೆ ಕ್ರಮ ಕೈಗೊಂಡು, ವಾಹನ ಚಾಲಕರಿಗೆ ನ್ಯಾಯವನ್ನು ಒದಗಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?